ಕರ್ನಾಟಕ ಸರ್ಕಾರ

# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,

**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560003.**

ಸಂಖ್ಯೆ: ಸಿ1/SSLC/ಫೆಬ್ರವರಿ–2023/ಪೂ.ಸಿ.ಪ.ವೇ.ಪ/124/2022–23 ದಿನಾಂಕ: 17.02.2023

## ಸುತ್ತೋಲೆ

ವಿಷಯ: 2022–23ನೇ ಸಾಲಿನ ರಾಜ್ಯಮಟ್ಟದ ಎಸ್.ಎಸ್.ಎಲ್.ಸಿ. ಪೂರ್ವಸಿದ್ಧತಾ ಪರೀಕ್ಷೆಯ ವೇಳಾಪಟ್ಟಿ ಮತ್ತು ಮಾರ್ಗಸೂಚಿಯನ್ವಯ ಪರೀಕ್ಷೆಯನ್ನು ನಡೆಸುವ ಬಗ್ಗೆ

ಉಲ್ಲೇಖ:
1. ಸರ್ಕಾರಿ ಆದೇಶ ಸಂಖ್ಯೆ: ಇಪಿ 197 ಎಸ್‌ಎಲ್‌ಬಿ 2021, ದಿನಾಂಕ: 25.01.2023
2. ಈ ಕಛೇರಿಯ ಸಮ ಪತ್ರ ಸಂಖ್ಯೆ ದಿನಾಂಕ: 30.01.2023
3. ಸರ್ಕಾರದ ಆದೇಶ ಸಂಖ್ಯೆ: ಇಪಿ 197 ಎಸ್‌ಎಲ್‌ಬಿ 2021, ದಿನಾಂಕ: 17.02.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ–1ರ ಸರ್ಕಾರದ ಆದೇಶದಂತೆ, 2022–23ನೇ ಸಾಲಿನ ರಾಜ್ಯಮಟ್ಟದ ಎಸ್.ಎಸ್.ಎಲ್.ಸಿ. ಪೂರ್ವಸಿದ್ಧತಾ ಪರೀಕ್ಷೆಯನ್ನು ನಡೆಸಲು ಉಲ್ಲೇಖ–2ರಂತೆ ವೇಳಾಪಟ್ಟಿಯನ್ನು ಪ್ರಕಟಿಸಿ, ಮಾದರಿ ಪ್ರಶ್ನೆಪತ್ರಿಕೆಗಳನ್ನು ಮಂಡಲಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಅಪ್‌ಲೋಡ್ ಮಾಡಲಾಗಿತ್ತು. ಮಂಡಲಿಯಿಂದ ಅಪ್‌ಲೋಡ್ ಮಾಡಲಾದ ಮಾದರಿ ಪ್ರಶ್ನೆಪತ್ರಿಕೆಗಳನುಸಾರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ನುರಿತ ಶಿಕ್ಷಕರಿಂದ ವಿಷಯವಾರು ಪ್ರಶ್ನೆಪತ್ರಿಕೆಗಳನ್ನು ಸಿದ್ಧಪಡಿಸಿ, ನಂತರ ಅವುಗಳನ್ನು ಮುದ್ರಿಸಿ, ವೇಳಾಪಟ್ಟಿಯಂತೆ ಆಯಾ ಪರೀಕ್ಷಾ ದಿನಗಳಂದು ಸಂಬಂಧಿಸಿದ ಶಾಲೆಗಳಿಗೆ ಪ್ರಶ್ನೆಪತ್ರಿಕೆಗಳನ್ನು ತಲುಪಿಸಿ ಪೂರ್ವಸಿದ್ಧತಾ ಪರೀಕ್ಷೆ ನಡೆಸಲು ತಿಳಿಸಲಾಗಿತ್ತು.

ಉಲ್ಲೇಖ–3ರ ಸರ್ಕಾರದ ಆದೇಶದಂತೆ, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ಹಂತದಲ್ಲಿ ವಾರ್ಷಿಕ ಪರೀಕ್ಷಾ ಮಾದರಿಯಲ್ಲಿ ಪ್ರಶ್ನೆಪತ್ರಿಕೆಗಳನ್ನು ಸಿದ್ಧಪಡಿಸಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಕಳುಹಿಸಲು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಮುದ್ರಿಸಿ ಪೂರ್ವಸಿದ್ಧತಾ ಪರೀಕ್ಷೆಯನ್ನು ನಡೆಸಬೇಕಾಗಿರುತ್ತದೆ. ಅದರಂತೆ 2022–23ನೇ ಸಾಲಿನ ರಾಜ್ಯಮಟ್ಟದ **ಎಸ್.ಎಸ್.ಎಲ್.ಸಿ. ಪೂರ್ವಸಿದ್ಧತಾ ಪರೀಕ್ಷೆಯನ್ನು ದಿನಾಂಕ: 27.02.2023 ರಿಂದ 04.03.2023ರವರೆಗೆ** ನಡೆಸಲು ತೀರ್ಮಾನಿಸಿದ್ದು, ವೇಳಾಪಟ್ಟಿಯನ್ನು ಮಂಡಲಿಯ ಜಾಲತಾಣದಲ್ಲಿ ಪ್ರಕಟಿಸಲಾಗಿದೆ ಹಾಗೂ ಸದರಿ ವೇಳಾಪಟ್ಟಿಯನ್ನು ಈ ಪತ್ರದೊಂದಿಗೆ ಅಡಕಗೊಳಿಸಿದೆ.

**ಪೂರ್ವಸಿದ್ಧತಾ ಪರೀಕ್ಷೆಗೆ ಸಂಬಂಧಿಸಿದ ಪ್ರಶ್ನೆಪತ್ರಿಕೆಗಳನ್ನು ರಾಜ್ಯದ ಎಲ್ಲಾ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ OTP based passwordನೊಂದಿಗೆ ನೀಡಲಾಗುವುದು. ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರಶ್ನೆಪತ್ರಿಕೆಗಳನ್ನು ಸೂಕ್ತ ಭದ್ರತೆಯೊಂದಿಗೆ ಸುರಕ್ಷಿತವಾಗಿ ಸಂರಕ್ಷಿಸಿಕೊಂಡು, ಪ್ರಶ್ನೆಪತ್ರಿಕೆಗಳ ಮುದ್ರಣಕ್ಕೆ ಸೂಕ್ತ ಕ್ರಮಕೈಗೊಂಡು, ಮುದ್ರಣಗೊಂಡ ಪ್ರಶ್ನೆಪತ್ರಿಕೆಗಳನ್ನು ವಿಷಯವಾರು ಮತ್ತು ಶಾಲಾವಾರು ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಪ್ರತ್ಯೇಕವಾಗಿ ಬಂಡಲ್‌ಗಳನ್ನು ಮಾಡಿ ಆಯಾ ಪರೀಕ್ಷಾ ದಿನಗಳಂದು ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರಿಗೆ ಸುರಕ್ಷಿತವಾಗಿ ತಲುಪಿಸುವುದು.**

ಎಸ್.ಎಸ್.ಎಲ್.ಸಿ. ಪೂರ್ವಸಿದ್ಧತಾ ಪರೀಕ್ಷೆಯು ವಿದ್ಯಾರ್ಥಿಗಳಿಗೆ ಹಾಗೂ ಶಿಕ್ಷಕರಿಗೆ ಮುಖ್ಯ ಪರೀಕ್ಷೆಗೆ ಸಂಬಂಧಿಸಿದಂತೆ ದಿಕ್ಸೂಚಿಯಾಗಿರುತ್ತದೆ. ಆದ್ದರಿಂದ ಪೂರ್ವಸಿದ್ಧತಾ ಪರೀಕ್ಷೆಯನ್ನು ಮುಖ್ಯ ಪರೀಕ್ಷೆಯನ್ನು ನಡೆಸುವ ರೀತಿಯಲ್ಲಿಯೇ ಶಿಸ್ತುಬದ್ಧವಾಗಿ, ಶಾಂತಿಯುತವಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಪರೀಕ್ಷಾ ಪೂರ್ವಸಿದ್ಧತೆಗಳನ್ನು ಮಾಡಿಕೊಂಡು, ಆಯಾ ಜಿಲ್ಲಾ ಉಪನಿರ್ದೇಶಕರು (ಆಡಳಿತ)ರವರು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಿ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸುವುದು. ಪರೀಕ್ಷಾ ಕಾರ್ಯದಲ್ಲಿ ಲೋಪದೋಷಗಳುಂಟಾದಲ್ಲಿ ನೇರವಾಗಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು.

2022–23ನೇ ಸಾಲಿನ ರಾಜ್ಯಮಟ್ಟದ ಎಸ್.ಎಸ್.ಎಲ್.ಸಿ. ಪೂರ್ವಸಿದ್ಧತಾ ಪರೀಕ್ಷೆಯನ್ನು ನಡೆಸಲು ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವುದು.

1. 2022–23ನೇ ಸಾಲಿನ ರಾಜ್ಯಮಟ್ಟದ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ನೋಂದಾಯಿಸಿರುವ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರಿಗೆ ಪೂರ್ವಸಿದ್ಧತಾ ಪರೀಕ್ಷೆಯ ವೇಳಾಪಟ್ಟಿಯನ್ನು ತಲುಪಿಸಲು ಕ್ರಮ ಕೈಗೊಳ್ಳುವುದು.
2. 2022–23ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ನೋಂದಾಯಿಸಿಕೊಂಡಿರುವ CCERF ವಿದ್ಯಾರ್ಥಿಗಳ ಶಾಲಾವಾರು ಹಾಗೂ ಬ್ಲಾಕ್‌ವಾರು ಕ್ರೋಢೀಕೃತ ಅಂಕಿಸಂಖ್ಯೆಗಳನ್ನು ಈಗಾಗಲೇ ಬಿ.ಇ.ಓ. ಲಾಗಿನ್‌ಗೆ ನೀಡಿದ್ದು, ಸದರಿ ಅಂಕಿಸಂಖ್ಯೆಗಳನ್ನು ಆಧರಿಸಿ ಪೂರ್ವಸಿದ್ಧತಾ ಪರೀಕ್ಷೆಯ ಪ್ರಶ್ನೆಪತ್ರಿಕೆಗಳನ್ನು ಮುದ್ರಿಸಿ ಪರೀಕ್ಷೆಯನ್ನು ನಡೆಸುವುದು.
3. ವೇಳಾಪಟ್ಟಿಯನ್ವಯ ರೂಟ್ ಮ್ಯಾಪ್ ಸಿದ್ಧಪಡಿಸಿಕೊಂಡು, ಆಯಾ ದಿನವೇ ಪ್ರಶ್ನೆಪತ್ರಿಕೆಗಳನ್ನು ಶಾಲೆಗಳಿಗೆ ನಿಗದಿತ ಸಮಯಕ್ಕೆ ತಲುಪಿಸುವಂತೆ ಸೂಕ್ತ ಕ್ರಮಕೈಗೊಳ್ಳುವುದು.
4. ಪರೀಕ್ಷಾ ನಂತರ ಉತ್ತರಪತ್ರಿಕೆಗಳ ಮೌಲ್ಯಮಾಪನವನ್ನು ಶಾಲಾ ಹಂತದಲ್ಲಿ ಕಟ್ಟುನಿಟ್ಟಾಗಿ ಹಾಗೂ ಪಾರದರ್ಶಕವಾಗಿ ಮಾಡುವಂತೆ ಶಾಲಾ ಮುಖ್ಯ ಶಿಕ್ಷಕರಿಗೆ ಸೂಚನೆ ನೀಡುವುದು.
5. ಪೂರ್ವಸಿದ್ಧತಾ ಪರೀಕ್ಷೆಗೆ ಸರ್ಕಾರದ ಆದೇಶದಲ್ಲಿ ಸೂಚಿಸಿರುವಂತೆ ಪ್ರತಿ ವಿದ್ಯಾರ್ಥಿಯಿಂದ ರೂ.50/– ಮಾತ್ರ (ಐವತ್ತು ರೂಪಾಯಿಗಳು ಮಾತ್ರ) ಪರೀಕ್ಷಾ ಶುಲ್ಕವನ್ನು ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರ ಮುಖಾಂತರ ಬಿ.ಇ.ಓ. ಬ್ಯಾಂಕ್ ಖಾತೆಗೆ ಪಡೆಯುವುದು ಹಾಗೂ ಶುಲ್ಕ ಸ್ವೀಕರಿಸಿದ ಮತ್ತು ಪರೀಕ್ಷಾ ಕಾರ್ಯ ವೆಚ್ಚಗಳ ಕುರಿತು ಲೆಕ್ಕಪತ್ರ ನಿರ್ವಹಿಸಿ ತಪಾಸಣಾ ಸಮಯದಲ್ಲಿ ಹಾಜರುಪಡಿಸತಕ್ಕದ್ದು.
6. ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ಅಪ್‌ಲೋಡ್ ಮಾಡಲಾಗುವ ಪ್ರಶ್ನೆಪತ್ರಿಕೆಗಳನ್ನು OTP based password ಬಳಸಿ, ಸ್ವತ: ಕ್ಷೇತ್ರ ಶಿಕ್ಷಣಾಧಿಕಾರಿಗಳೇ open ಮಾಡಿ, ಎಲ್ಲಾ ವಿಷಯಗಳ ಪ್ರಶ್ನೆಪತ್ರಿಕೆಗಳು ಲಾಗಿನ್‌ನಲ್ಲಿ ಲಭ್ಯವಿರುವುದನ್ನು ಖಾತರಿಪಡಿಸಿಕೊಂಡು, ಗೌಪ್ಯತೆ ಮತ್ತು ಪಾರದರ್ಶಕತೆಯನ್ನು ಕಾಪಾಡಿಕೊಂಡು ಮುದ್ರಣಕ್ಕೆ ವ್ಯವಸ್ಥೆ ಮಾಡಿಕೊಳ್ಳುವುದು. ಯಾವುದೇ ಕಾರಣಕ್ಕೂ ಪ್ರಶ್ನೆಪತ್ರಿಕೆಗಳು ಪರೀಕ್ಷಾ ಪೂರ್ವದಲ್ಲಿ ಬಹಿರಂಗವಾಗದಂತೆ ಎಚ್ಚರಿಕೆವಹಿಸುವುದು.
7. ವೇಳಾಪಟ್ಟಿಯಲ್ಲಿರುವ ವಿಷಯಗಳ ಪ್ರಶ್ನೆಪತ್ರಿಕೆಗಳನ್ನು ಮಂಡಲಿಯಿಂದ ಶೀಘ್ರದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಲಾಗಿನ್‌ಗೆ ನೀಡಲಾಗುವುದು.

2022–23ನೇ ಸಾಲಿನ ರಾಜ್ಯಮಟ್ಟದ ಎಸ್.ಎಸ್.ಎಲ್.ಸಿ. ಪೂರ್ವಸಿದ್ಧತಾ ಪರೀಕ್ಷೆಯನ್ನು ಜಿಲ್ಲಾ ಉಪನಿರ್ದೇಶಕರು (ಆಡಳಿತ)ರವರ ನೇತೃತ್ವದಲ್ಲಿ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಂತದಲ್ಲಿ ಪಾರದರ್ಶಕತೆ ಕಾಪಾಡಿಕೊಂಡು ಸುರಕ್ಷತೆಯೊಂದಿಗೆ ವ್ಯವಸ್ಥಿತವಾಗಿ ನಡೆಸಲು ಸೂಕ್ತ ಕ್ರಮವಹಿಸುವಂತೆ ತಿಳಿಸಿದೆ.

**(ಗೋಪಾಲಕೃಷ್ಣ ಹೆಚ್.ಎನ್.)**
**ನಿರ್ದೇಶಕರು (ಪರೀಕ್ಷೆಗಳು)**

ಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಶಾಖಾಧಿಕಾರಿಗಳು, ಎ–ಶಾಖೆ, ಬಿ–ಶಾಖೆ ಮತ್ತು ಎಲ್ಲಾ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಲೆಕ್ಕಾಧಿಕಾರಿಗಳು, ಲೆಕ್ಕಪತ್ರ ಶಾಖೆ, ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು, ಗಣಕ ಶಾಖೆಯವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಹಾಗೂ ವೇಳಾಪಟ್ಟಿ ಮತ್ತು ಸುತ್ತೋಲೆಯನ್ನು ಮಂಡಲಿಯ ಜಾಲತಾಣ, ಬಿ.ಇ.ಓ. ಲಾಗಿನ್ ಹಾಗೂ ಶಾಲಾ ಲಾಗಿನ್‌ನಲ್ಲಿ ಪ್ರಕಟಿಸಲು.
6. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ ಮತ್ತು ಅನುದಾನರಹಿತ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ (ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

ಪ್ರತಿಯನ್ನು:

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು, ರವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.
3. ಮಾನ್ಯ ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು ರವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.
4. ಮಾನ್ಯ ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡರವರಿಗೆ ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ.